ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	615
ಸದಸ್ಯರ ಹೆಸರು	:	ಶ್ರೀ ಆರ್.ಬಿ.ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	11-03-2020
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

	ಪ್ರಶ್ನೆ	ಉತ್ತರ
(ಅ)	ಬಾಗಲಕೋಟೆ ಜಿಲ್ಲೆಯಲ್ಲಿ ಘಟಪ್ರಭಾ ನದಿಯ ಪ್ರವಾಹದಿಂದಾಗಿ ಹಾನಿಗೊಳಗಾದ ಕಬ್ಬು ಇಳುವರಿ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶದಲ್ಲಿ ಬೆಳೆಯಬಹುದಾದ ಕಬ್ಬಿನ ಒಟ್ಟು ಪ್ರಮಾಣವೆಷ್ಟು;	ಘಟಪ್ರಭಾ ನದಿಯು ಬಾಗಲಕೋಟೆ ಜಿಲ್ಲೆಯ ಮುಧೋಳ, ಬೀಳಗಿ ಮತ್ತು ಬಾಗಲಕೋಟೆ ತಾಲ್ಲೂಕುಗಳಲ್ಲಿ ಹರಿಯುತ್ತದೆ. ಕಾರಣ ಮುಧೋಳ-13469 ಹೆಕ್ಟೇರ್, ಬೀಳಗಿ-1772 ಹೆಕ್ಟೇರ್ ಮತ್ತು ಬಾಗಲಕೋಟೆ ತಾಲ್ಲೂಕಿನಲ್ಲಿ 1550 ಹೆಕ್ಟೇರ್ ಪ್ರದೇಶದಲ್ಲಿ ಹೀಗೆ ಒಟ್ಟು 16791 ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆ ಘಟಪ್ರಭಾ ನದಿಯ ಪ್ರವಾಹದಿಂದ ಹಾನಿಗೊಳಗಾಗಿರುತ್ತದೆ. ಪ್ರತಿ ಹೆಕ್ಟೇರ್ ಅಂದಾಜು 100 ಟನ್ ಕಬ್ಬು ಬೆಳೆಯಬಹುದಾಗಿದೆ.
(ಆ)	ಪ್ರವಾಹದಿಂದ ನಷ್ಟಗೊಂಡ ಕಬ್ಬು ಬೆಳೆಗಾರರಿಗೆ ಸರ್ಕಾರ ನೀಡಿರುವ ಪರಿಹಾರದ ಮೊತ್ತವೆಷ್ಟು; ಈ ಪರಿಹಾರ ಮೊತ್ತವು ಸಂಬಂಧಿಸಿದ ಕಬ್ಬು ಬೆಳೆಗಾರರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಪ್ರವಾಹದಿಂದ ಹಾನಿಯಾದ ನೀರಾವರಿ ಬೆಳೆ ಹಾನಿಗೆ ಪ್ರತಿ ಹೆಕ್ಟೇರ್ ಗೆ ಮಾರ್ಗಸೂಚಿಯಂತೆ ರೂ 13500/- ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ 10000/- ಸೇರಿ ಒಟ್ಟು ರೂ 23500/- ದರದಲ್ಲಿ ಗರಿಷ್ಠ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಇನ್ ಪುಟ್ ಸಬ್ಸಿಡಿ ಪಾವತಿಸಲಾಗುತ್ತಿದೆ. ಪ್ರಸ್ತುತ ಮೇಲಿನ 3 ತಾಲ್ಲೂಕುಗಳಲ್ಲಿ 8778 ರೈತರಿಗೆ ರೂ 2222.75 ಲಕ್ಷ ಇನ್ ಪುಟ್ ಸಬ್ಸಿಡಿ ಮೊತ್ತವನ್ನು ಪರಿಹಾರ ತಂತ್ರಾಂಶದ ಮೂಲಕ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ.
(ಇ)	ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?	ಉದ್ಭವಿಸುವುದಿಲ್ಲ

ಕಂಇ 123 ಟಿಎನ್‌ಆರ್ 2020

(ಆರ್ ಅಶೋಕ)
ಕಂದಾಯ ಸಚಿವರು